# ಕರ್ನಾಟಕ ವಿಧಾನ ಪರಿಷತ್ತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ, ಮಾನ್ಯ ಸದಸ್ಯರು ವಿಧಾನ ಪರಿಷತ್ತು ಇವರು ಕೊಡಗು ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಹಾಗೂ ಅತ್ಯಾಧುನಿಕ ವೈದ್ಯಕೀಯ ಉಪಕರಣಗಳ ನಿರಂತರ ಕೊರತೆಯಿರುವುದರಿಂದ ಸಾರ್ವಜನಿಕರಿಗೆ ಸೂಕ್ತ ವೈದ್ಯಕೀಯ ಸೇವೆ ಸಕಾಲದಲ್ಲಿ ದೊರೆಯದೆ, ಜನ ಸಾಮಾನ್ಯರು ಸಂಕಷ್ಟಕ್ಕೆ ಸಿಲುಕಿರುವ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸಲು ಬಯಸಿ, 72ರ ನಿಯಮದಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಹೇಳಿಕೆ.

******

ಕೊಡಗು ಜಿಲ್ಲೆಯ ಸರ್ಕಾರಿ ಆಸ್ಪತ್ರೆಯಲ್ಲಿನ ತಜ್ಞ ವೈದ್ಯರ ವಿವರ ಈ ಕೆಳಕಂಡಂತಿದೆ:-

- ಕೊಡಗು ಜಿಲ್ಲೆಯ ಜಿಲ್ಲಾಸ್ಪತ್ರೆ ಹಾಗೂ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ 28 ಹುದ್ದೆಗಳು ಮಂಜೂರಾಗಿದ್ದು, 18 ಕಾರ್ಯನಿರತ ಹಾಗೂ 10 ಹುದ್ದೆಗಳು ಖಾಲಿ ಇರುತ್ತದೆ.
- 2 ಸಾರ್ವಜನಿಕ ಆಸ್ಪತ್ರೆಗಳಲ್ಲಿ 22 ಹುದ್ದೆಗಳು ಮಂಜೂರಾಗಿದ್ದು, 12 ಖಾಯಂ ವೈದ್ಯರು, 2 ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದು, 8 ಹುದ್ದೆಗಳು ಖಾಲಿ ಇರುತ್ತದೆ.
- 7 ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ 25 ಹುದ್ದೆಗಳು ಮಂಜೂರಾಗಿದ್ದು, 14 ಕಾರ್ಯನಿರತ ಹಾಗೂ 11 ಹುದ್ದೆಗಳು ಖಾಲಿ ಇರುತ್ತವೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಮೇ 2021 ರಲ್ಲಿ ವಿಶೇಷ ನೇರ ನೇಮಕಾತಿ ಸಮಿತಿ ಮೂಲಕ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಕೊಡಗು ಜಿಲ್ಲೆಯಲ್ಲಿ ಖಾಲಿ ಇದ್ದ 31 ತಜ್ಞ ವೈದ್ಯರನ್ನು ನೇಮಕ ಮಾಡಲಾಗಿತ್ತು. 09 ತಜ್ಞ ವೈದ್ಯರುಗಳು ಮಾತ್ರ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ. ಸೇವಾನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬಂದಿರುವ 04 ತಜ್ಞ ವೈದ್ಯರನ್ನು ಜಿಲ್ಲೆಯಲ್ಲಿರುವ ಆಸ್ಪತ್ರೆಗಳಿಗೆ ನೇಮಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 29 ತಜ್ಞ ವೈದ್ಯರ ಹುದ್ದೆಗಳು ಖಾಲಿ ಇರುತ್ತವೆ.

ಇಲಾಖೆಯಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಸಮಿತಿಯ ಮೂಲಕ ಭರ್ತಿ ಮಾಡಲಾಗುತ್ತಿದ್ದು, ಹೆಚ್ಚುವರಿ ಪಟ್ಟಿಯಲ್ಲಿನ ವೈದ್ಯಾಧಿಕಾರಿಗಳನ್ನು ಸ್ಥಳನಿಯುಕ್ತಿಗೊಳಿಸುವ ಸಂಧರ್ಭದಲ್ಲಿ ಕೊಡಗು ಜಿಲ್ಲೆಯ ಸರ್ಕಾರಿ ಆಸ್ಪತ್ರೆ/ ಆರೋಗ್ಯ ಕೇಂದ್ರದಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಪ್ರಸ್ತುತ ಸೇವಾನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬಂದಿರುವ 04 ತಜ್ಞ ವೈದ್ಯರನ್ನು ಜಿಲ್ಲೆಯಲ್ಲಿರುವ ಆಸ್ಪತ್ರೆಗಳಿಗೆ ನೇಮಿಸಲಾಗಿದ್ದು, ಸಿ.ಪಿ.ಎಸ್ ವ್ಯಾಸಂಗ ಪೂರೈಸಿ ಬರುವ ತಜ್ಞರನ್ನು ಮತ್ತು ಕಡ್ಡಾಯ ಸರ್ಕಾರಿ ಸೇವೆ ಸಲ್ಲಿಸುವ ತಜ್ಞ ವೈದ್ಯರನ್ನು ನೇಮಿಸುವ ಮೂಲಕ ತಜ್ಞ ವೈದ್ಯರ ಕೊರತೆ ನೀಗಿಸಲು ಕ್ರಮಕೈಗೊಳ್ಳಲಾಗುವುದು.

ಕೊಡಗು ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಿಗೆ ಅವಶ್ಯವಿರುವ ವೈದ್ಯಕೀಯ ಉಪಕರಣಗಳನ್ನು ಖರೀದಿಸಿ ಸರಬರಾಜು ಮಾಡಲು 2021-22ನೇ ಸಾಲಿನ ಜಿಲ್ಲಾ ಪಂಚಾಯತ್ ನಿಧಿಯಿಂದ ರೂ.1,30,00,000-00 ಅನುದಾನ ಮಂಜೂರಾಗಿದ್ದು, ಸದರಿ ಅನುದಾನದಲ್ಲಿ ಅವಶ್ಯವಿರುವ ಉಪಕರಣಗಳನ್ನು ತಜ್ಞತೆಗನುಗುಣವಾಗಿ ಖರೀದಿಸಲು ಕ್ರಮ ತೆಗೆದುಕೊಳ್ಳಲಾಗುತ್ತದೆ.

**ಆಕುಕ 48 ಹೆಚ್ಎಸ್ಹೆಚ್ 2021**

(ಡಾ.ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು.